# ಸ್ವಯಂ ಪ್ರೇರಿತ ರಕ್ತದಾನ ಶಿಬಿರ

KP



ರಕ್ತದಾನ ಮಾಡುತ್ತಿರುವ ವಿದ್ಯಾರ್ಥಿಗಳು

• **ಕನ್ನಡಪ್ರಭ ವಾರ್ತೆ** ಕಾರ್ಕಳ

ಮಂಜುನಾಥ ಪೈ ಸ್ಮಾರಕ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಹುತಾತ್ಮ ಯೋಧರ ಗೌರವಾರ್ಥ ಸ್ವಯಂ ಪ್ರೇರಿತ ರಕ್ತದಾನ ಶಿಬಿರವು ಶನಿವಾರ ನಡೆಯಿತು.

ಲಯನ್ಸ್ ಕ್ಲಬ್ ಬೆಳ್ಮಣ್, ಜಿ.ಶಂಕರ್ ಫ್ಯಾಮಿಲಿ ಟ್ರಸ್ಟ್ ಅಂಬಲಪಾಡಿ, ಮೊಗವೀರ ಸಂಘಟನೆ ಮಂದರ್ತಿ ಘಟಕ, ಕೆಎಂಸಿ ಮಣಿಪಾಲ, ಕಾಲೇಜಿನ ಯುವ ರೆಡ್ ಕ್ರಾಸ್ ಘಟಕ, ಎನ್‌ಎಸ್‌ಎಸ್, ರೋಟರಾಕ್ಟ್ ಕ್ಲಬ್ ಹಾಗೂ ವಿದ್ಯಾರ್ಥಿ ವೇದಿಕೆಗಳ ಆಶ್ರಯದಲ್ಲಿ ಈ ಕಾರ್ಯಕ್ರಮ ನಡೆಯಿತು.

ಬೆಳ್ಮಣ್ಣು ಲಯನ್ಸ್ ಕ್ಲಬ್ ಅಧ್ಯಕ್ಷ ಸದಾನಂದ ಶೆಟ್ಟಿಗಾರ್ ಉದ್ಘಾಟಿಸಿದರು. ಪ್ರಾಂಶುಪಾಲ ಪ್ರೊ. ಶ್ರೀವರ್ಮ ಅಜ್ರಿ ಅಧ್ಯಕ್ಷತೆ ವಹಿಸಿದ್ದರು. ಮಣಿಪಾಲ ಕೆ.ಎಂ.ಸಿ ರಕ್ತನಿಧಿ ಘಟಕದ ವೈದ್ಯಾಧಿಕಾರಿ ಡಾ. ಇಶಾ ರಕ್ತದಾನದ ಮಹತ್ವದ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು.

52 ಬಾರಿ ರಕ್ತದಾನ ಮಾಡಿರುವ ಮುಡಾರು ಸ.ಹಿ.ಪ್ರಾ.ಶಾಲೆಯ ಮುಖ್ಯಶಿಕ್ಷಕ ದೇವದಾಸ ಪಾಟ್ಕರ್, ರಕ್ತದಾನದ ಬಗ್ಗೆ ಅನಿಸಿಕೆ ಹಂಚಿಕೊಂಡರು. ಬೆಳ್ಮಣ್ಣು ಲಯನ್ಸ್ ಕ್ಲಬ್ ಕಾರ್ಯದರ್ಶಿ ವಿಶ್ವನಾಥ ಪಾಟ್ಕರ್, ಮೊಗವೀರ ಸಂಘಟನೆ ಮಂದರ್ತಿ ಘಟಕದ ಅಧ್ಯಕ್ಷ ಸಂದೀಪ್ ಅಮೀನ್, ಉಪನ್ಯಾಸಕ ವೃಂದ, ಕಚೇರಿ ಸಿಬ್ಬಂದಿ ಉಪಸ್ಥಿತರಿದ್ದರು.

ಎನ್ನೆಸ್ಸೆಸ್ ಘಟಕ 1ರ ಯೋಜನಾಧಿಕಾರಿ ಜ್ಯೋತಿ ಶೆಟ್ಟಿ ಸ್ವಾಗತಿಸಿದರು. ಘಟಕ 2ರ ಯೋಜನಾಧಿಕಾರಿ ನವೀನ ಪ್ರಾಸ್ತಾವಿಕವಾಗಿ ಮಾತನಾಡಿದರು. ಗ್ರಂಥಪಾಲಕ ವೆಂಕಟೇಶ್ ನಿರೂಪಿಸಿದರು. ಯುವ ರೆಡ್ ಕ್ರಾಸ್ ಘಟಕದ ಸಂಚಾಲಕಿ ದಿವ್ಯಾ ಪ್ರಭು ವಂದಿಸಿದರು. ಶಿಬಿರದಲ್ಲಿ 102 ವಿದ್ಯಾರ್ಥಿಗಳು, ಪೂರ್ವ ವಿದ್ಯಾರ್ಥಿಗಳು ಹಾಗೂ ಉಪನ್ಯಾಸಕರು ರಕ್ತದಾನ ಮಾಡಿದರು.

ಫೋಟೋಕ್ಯಾಪ್ಷನ್-ಕಾರ್ಕಳದ ಎಂಪಿಎಂ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಶನಿವಾರ ಸ್ವಯಂ ಪ್ರೇರಿತ ರಕ್ತದಾನ ಶಿಬಿರ ನಡೆಯಿತು.